ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್**

ನಿರ್ಮಲ ಭಾರತ್ ಅಭಿಯಾನ

ಸಂಖ್ಯೆ : ಗ್ರಾಅಪ/ರಾನೀನೈಮಿ/ನಿಭಾಅ/66/2013-14 ದಿನಾಂಕ 14.02.2014

**ಮಂಜೂರಾತಿ ಆದೇಶ**

**ವಿಷಯ:** ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆಗಾಗಿ 1 ಗ್ರಾಮ ಪಂಚಾಯಿತಿಗಳಿಗೆ ಮಂಜೂರಾತಿ ನೀಡುತ್ತಿರುವ ಬಗ್ಗೆ.

**ಉಲ್ಲೇಖ:** ನಿರ್ಮಲ ಭಾರತ್ ಅಭಿಯಾನದ ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದ ದಿನಾಂಕ 01.04.2013ರ ಕನ್ನಡ ಸುತ್ತೋಲೆ.

-------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ತಮ್ಮ ಜಿಲ್ಲೆಯಿಂದ 4 ಗ್ರಾಮ ಪಂಚಾಯತಿಗೆ ಪ್ರಸ್ತಾವನೆಯನ್ನು ಕಳುಹಿಸಿದ್ದು, ಈ ಕೆಳಗಿನ 1 ಗ್ರಾಮ ಪಂಚಾಯತಿಗೆ ಅನುಮೋದನೆ ನೀಡಿ ಅನುಷ್ಠಾನಗೊಳಸಲು ಆದೇಶಿಸಲಾಗಿದೆ.

| ಕ್ರ. ಸಂ. | ಜಿಲ್ಲೆ | ತಾಲ್ಲೂಕು | ಗ್ರಾಮ ಪಂಚಾಯತಿ | ಎನ್‌ಬಿಎ ಅಡಿಯಲ್ಲಿ ಅನುಮೋದನೆಯಾದ ಮೊತ್ತ (ರೂ.ಲಕ್ಷಗಳಲ್ಲಿ) | ಎನ್‌ಬಿಎ ಅಡಿಯಲ್ಲಿ ಅನುಷ್ಠಾನಗೊಳಸಲು ಅನುಮೋದನೆಯಾದ ಚಟುವಟಿಕೆಗಳು | ಚಟುವಟಿಕೆವಾರು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|---|---|
| 1 | ಶಿವಮೊಗ್ಗ | ಹೊಸನಗರ | ರಿಪ್ಪನ್ ಪೇಟೆ | 7.76 | 1. ಸಂಗ್ರಹಣ ಬುಟ್ಟಿ | 1.58 |
| | | | | | 2. ಸಂಗ್ರಹಣ ಘಟಕ | 5.00 |
| | | | | | 3. ತಳ್ಳುವ ಗಾಡಿ | 0.80 |
| | | | | | 4. ಸಲಕರಣೆಗಳು | 0.38 |
| ಒಟ್ಟು ಮೊತ್ತ | | | | | | **7.76** |

ಮೇಲ್ಕಾಣಿಸಿದ ನಿಬಂಧಿನೆಗಳನ್ವಯ ಘಟಕವಾರು ಕಾಮಗಾರಿಗಳನ್ನು ಪೂರ್ಣಗೊಳಿಸಿ ಫೋಟೋ ದಾಖಲಾತಿಯೊಂದಿಗೆ ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್‌ಗೆ ವರದಿಯನ್ನು ಸಲ್ಲಿಸುವುದು.

ನಿಬಂಧನೆಗಳು:-

1. ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಘನ ಮತ್ತು ದ್ರವತ್ಯಾಜ್ಯ ನಿರ್ವಹಣಾ ಕಾಮಗಾರಿಯ ಸಂಪೂರ್ಣ ಉಸ್ತುವಾರಿಯು ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರದಾಗಿರುತ್ತದೆ.
2. ಕೆ.ಟಿ.ಪಿ.ಪಿ ಕಾಯ್ದೆಯ ನಿಯಾಮಾನುಸಾರವಾಗಿಯೇ ಅನುಷ್ಠಾನಗೊಳಸಬೇಕು
3. ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆಯ ಪ್ರಗತಿ ಪರಿಶೀಲನೆಯನ್ನು ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ ಮತ್ತು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ತಿಂಗಳಗೊಮ್ಮೆ ಪರಿಶೀಲಿಸಿ, ಪ್ರಗತಿ ವರದಿಯನ್ನು ರಾಜ್ಯ ಕಛೇರಿಗೆ ಸಲ್ಲಿಸಬೇಕು.
4. ಎಲ್ಲಾ ಸಾಮಾಗ್ರಿಗಳು ಗುಣಮಟ್ಟದಲ್ಲಿರುವುದನ್ನು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಮುಖ್ಯ ಇಂಜಿನಿಯರ್‌ರವರು ಖಾತ್ರಿ ಪಡಿಸಬೇಕು.
5. ಸ್ಥಳೀಯ ಬೇಡಿಕೆಗಳಿಗೆ ಅನುಗುಣವಾಗಿರುವಂತೆ ಪ್ರೋಕ್ಯೂರ್‌ಮೆಂಟ್ ಮಾಡಬೇಕು.
6. ವರ್ಷದ ಎಲ್ಲಾ ದಿನವು ಘಟಕವು ಚಾಲನೆಯಲ್ಲಿದ್ದು, ಸ್ಥಗಿತಗೊಳ್ಳದಂತೆ ಸಂಪೂರ್ಣ ಉಪಯೋಗವಾಗಬೇಕು.
7. ಘಟಕ ಪ್ರಾರಂಭಕ್ಕೂ ಮೊದಲೇ ನಿಗದಿತ ಜಾಗವು ಗ್ರಾಮ ಪಂಚಾಯ್ತಿಗೆ ಹಸ್ತಾಂತರವಾಗಿರಬೇಕು. ಇದರ ನಕಲನ್ನು ರಾಜ್ಯ ಕಛೇರಿಗೆ ಸಲ್ಲಿಸಬೇಕು. ನಂತರವೇ ಅನುಮೋದನೆ ಎಂದು ಪರಿಗಣಿಸುವುದು.
8. ಘನ ಮತ್ತು ದ್ರವತ್ಯಾಜ್ಯ ನಿರ್ವಹಣಾ ಕಾಮಗಾರಿ ಅಡಿಯಲ್ಲಿ ನಿರ್ಮಾಣಗೊಂಡ ಯಾವುದೇ ನಿರ್ಮಾಣಗಳು ಅಥವಾ ಚಟುವಟಿಕೆಗಳು ಬದಲಿ ವಿನಿಯೋಗಕ್ಕೆ ಅವಕಾಶವಿರುವುದಿಲ್ಲ.
9. ಪ್ರತೀ ಗ್ರಾಮ ಪಂಚಾಯ್ತಿಯಲ್ಲೂ ಘನ ಮತ್ತು ದ್ರವತ್ಯಾಜ್ಯ ನಿರ್ವಹಣಾ ಕಾಮಗಾರಿ ಬಗ್ಗೆ ವಿವರವಾದ ಪ್ರತ್ಯೇಕ ದಾಖಲಾತಿಗಳಿರಬೇಕು.
10. ಮೇಲ್ಕಂಡ 38ಗ್ರಾಮ ಪಂಚಾಯ್ತಿಗಳ ಪೈಕಿ ಈಗಾಗಲೇ ಎನ್.ಜಿ.ಪಿ ಪಡೆದ ಗ್ರಾಮಪಂಚಾಯಿತಿಗಳಲ್ಲಿ ಸುಸ್ಥಿರತೆಯನ್ನು ನಿರ್ವಹಿಸುವುದು ಹಾಗೂ ಉಳಿದ ಗ್ರಾಮ ಪಂಚಾಯಿತಿಗಳನ್ನು 2014-15 ಸಾಲಿನಲ್ಲಿ ನಿರ್ಮಲ ಗ್ರಾಮ ಪುರಸ್ಕಾರಕ್ಕೆ (NGP) ಕಡ್ಡಾಯವಾಗಿ ಅಣಿಗೊಳಸಬೇಕು.
11. ಘನ ಮತ್ತು ದ್ರವತ್ಯಾಜ್ಯ ನಿರ್ವಹಣಾ ಕಾಮಗಾರಿಗಾಗಿ ನಿಗದಿಪಡಿಸಿದ ಮೊತ್ತವನ್ನು ಬೇರೆ ಕಾಮಗಾರಿಗಳಿಗೆ ಬಳಸಿಕೊಳ್ಳುವಂತಿಲ್ಲ.

**ಮಿಷನ್ ನಿರ್ದೇಶಕರು,**
ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್,
ಹಾಗೂ ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ರವರಿಗೆ;

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತ್, ಶಿವಮೊಗ್ಗ.

ಪ್ರತಿಯನ್ನು :-

AES RDPR
8/12